**1ನೇ ಹೆಚ್ಚುವರಿ ಹಿರಿಯ ವ್ಯವಹಾರಿಕ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ**
**ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಪುತ್ತೂರು , ದ.ಕ.**

ಸಿ.ಸಿ. ನಂಃ 244/2019
ಸಿ.ಡಬ್ಲ್ಯೂಃ 20
ಪಿ.ಡಬ್ಲ್ಯೂಃ 11

ಸಾಕ್ಷಿದಾರರ ಹೆಸರುಃ ಇಲಿಯಾಸ್

ತಂದೆಯ ಹೆಸರುಃ ಅಬ್ದುಲ್ಲಾ

ವಯಸ್ಸುಃ 45 ವರ್ಷ

ಉದ್ಯೋಗಃ ಚಾಲಕ

ವಾಸಸ್ಥಳಃ ಆರ್ಯಾಪು ಗ್ರಾಮ

ದಿನಾಂಕ 21-07-2026 ರಂದು ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದರಲ್ಲಿ ಇರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ನಿಪಿ25 ಎಂದು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ25(ಎ) ಎಂದು ಗುರುತಿಸಲಾಯಿತು.

ನಿಪಿ25 ಕ್ಕೆ ಸುಮಾರು 6-7 ವರ್ಷಗಳ ಹಿಂದೆ ಸಹಿ ಮಾಡಿರುತ್ತೇನೆ. ಸಂಪ್ಯ ಪೋಲೀಸ್ ಠಾಣೆಯಲ್ಲಿ ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ವ್ಯಕ್ತಿಗಳನ್ನು ಮತ್ತು ಸೊತ್ತುಗಳನ್ನು ಪೋಲೀಸರು ತಮ್ಮ ವಶಕ್ಕೆ ಪಡೆದ ಬಗ್ಗೆ ನನಗೆ ಗೊತ್ತಿಲ್ಲ. ನಿಪಿ25 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಮತ್ತೊಂದು ದಾಖಲೆ ತೋರಿಸಲಾಗಿ ಅದರಲ್ಲಿ ಇರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ನಿಪಿ26 ಎಂದು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ26(ಎ) ಎಂದು ಗುರುತಿಸಲಾಯಿತು.

ನಿಪಿ26 ಕ್ಕೆ ಸುಮಾರು 6-7 ವರ್ಷಗಳ ಹಿಂದೆ ಸಹಿ ಮಾಡಿರುತ್ತೇನೆ. ಸಂಪ್ಯ ಪೋಲೀಸ್ ಠಾಣೆಯಲ್ಲಿ ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಸೊತ್ತುಗಳನ್ನು ಪೋಲೀಸರು ತಮ್ಮ ವಶಕ್ಕೆ ಪಡೆದ ಬಗ್ಗೆ ನನಗೆ ಗೊತ್ತಿಲ್ಲ. ನಿಪಿ26 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿಲ್ಲ.

ಆರೋಪಿಗಳ ಪರಿಚಯ ನನಗೆ ಇಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸದ್ರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ತಮಗೆ ಪಾಟೀ ಸವಾಲು ಮಾಡಲು ಅವಕಾಶ ನೀಡಬೇಕೆಂದು ಕೋರಿದ್ದು , ವಾದವನ್ನು ಆಲಿಸಿ, ದಾಖಲೆಗಳನ್ನು ಪರಿಶೀಲಿಸಿದ ನಂತರ ಸದರಿ ಸಾಕ್ಷಿಯ ಸಾಕ್ಷ್ಯವನ್ನು ಪರಿಗಣಿಸಿ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 01.11.2017 ರಂದು ಪುತ್ತೂರು ತಾಲೂಕು ಕಸಬ ಗ್ರಾಮದ ಬೈಪಾಸ್ ಮಕ್ಕಳ ಮಂಟಪದ ಬಳಿ ಮಂಜೇಶ್ವರ – ಸುಬ್ರಮಣ್ಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಪೋಲೀಸರು ಕೆಎ 19 ಎಎ 9353 ನೊಂದಣಿ ಸಂಖ್ಯೆಯ ಲಾರಿಯನ್ನು ನಿಲ್ಲಿಸಿದ್ದು, ಅದರಲ್ಲಿ ಆರೋಪಿಗಳಾದ ಮಹಮ್ಮದ್ ಇರ್ಷಾದ್ ಮತ್ತು ಅಬ್ದುಲ್ ಹಕೀಂ ರವರು ಲಾರಿಯಲ್ಲಿರುವ 3 ಪಾಲಿತೀನ್ ಚೀಲಗಳಲ್ಲಿ ಇದ್ದ ಕಾಳು ಮೆಣಸುಗಳನ್ನು ಚಾಸಾ1 ರವರ ಅಂಗಡಿಯಿಂದ ಕದ್ದಿರುವುದಾಗಿ ತಪ್ಪೊಪ್ಪಿಕೊಂಡ ಮೇರೆಗೆ ಪೋಲೀಸರು ಸ್ಥಳದಲ್ಲಿ 11.15 ಗಂಟೆಯಿಂದ 12.15 ರವರೆಗೆ ನಿಪಿ25 ರಂತೆ ನನ್ನ ಹಾಗೂ ಚಾಸಾ19 ರವರ ಸಮಕ್ಷಮ ಮಹಜರನ್ನು ತಯಾರಿಸಿ ಆರೋಪಿಗಳನ್ನು ವಶಕ್ಕೆ ಪಡೆದು 3 ಗೋಣಿ ಚೀಲಗಳಲ್ಲಿ ತಲಾ 50 ಕೆ.ಜಿ., 35 ಕೆ.ಜಿ., 25 ಕೆ.ಜಿ. ಕಾಳು ಮೆಣಸನ್ನು ಹಾಗೂ ಲಾರಿಯನ್ನು ತಮ್ಮ ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಾನು ಸ್ಥಳದಲ್ಲಿ ಹಾಜರಿದ್ದು ನಿಪಿ25 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ05.01.2018 ರಂದು ಪುತ್ತೂರು ಗ್ರಾಮಾಂತರ ಪೋಲೀಸ್ ಠಾಣೆಯಲ್ಲಿ ಆರೋಪಿಯಾದ ಅಬ್ದುಲ್ ಸಮದ್ ಎನ್ನುವವರು ಕೃತ್ಯಕ್ಕೆ ಬಳಸಿದ ಪಿಕಾಸನ್ನು ಠಾಣೆಗೆ ತಂದು ಹಾಜರುಪಡಿಸಿದ ಸಮಯ ಪೋಲೀಸರು ನನ್ನ ಹಾಗೂ ಚಾಸಾ19 ರವರ ಸಮಕ್ಷಮ ನಿಪಿ26 ರಂತೆ ಮಹಜರನ್ನು ತಯಾರಿಸಿ ಪಿಕಾಸನ್ನು ತಮ್ಮ ವಶಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯ ನಾನು ಸ್ಥಳದಲ್ಲಿ ಹಾಜರಿದ್ದು ನಿಪಿ26 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರು ನನ್ನ ಪರಿಚಯಸ್ಥರಾದ ಕಾರಣ ಅವರನ್ನು ಶಿಕ್ಷೆಯಿಂದ ರಕ್ಷಿಸುವ ಸಲುವಾಗಿ ನಿಪಿ25 ಮತ್ತು 26 ಮಹಜರುಗಳ ಸಂಬಂಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಏನೂ ಇರುವುದಿಲ್ಲ.

ಮರು ವಿಚಾರಣೆಃ ಇಲ್ಲ.

ನನ್ನ ಉಕ್ತಲೇಖನ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ, ಹೇ, ಕೇ, ಸರಿ ಇದೆ.

1ನೇ ಹೆಚ್ಚುವರಿ ಹಿರಿಯ ವ್ಯವಹಾರಿಕ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಢಾಧಿಕಾರಿ, ಪುತ್ತೂರು ದ.ಕ.